## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಸಹಕಾರ ಸಂಘಗಳ/ಬ್ಯಾಂಕುಗಳ ಹಾಗೂ ಸೌಹಾರ್ದ ಸಹಕಾರಿಗಳ 2021-22ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯನ್ನು ಭೌತಿಕವಾಗಿ/ Virtual Meeting ಮೂಲಕ ನಡೆಸಲು ಅನುಮತಿ ನೀಡುವ ಕುರಿತು.

**ಓದಲಾಗಿದೆ:-** ಸಹಕಾರ ಸಂಘಗಳ ನಿಬಂಧಕರ ಪತ್ರ ಸಂಖ್ಯೆ: ಯುಬಿಸಿ-2/19/ವಾರ್ಷಿಕ ಮಹಾಸಭೆ/2022-23 ದಿನಾಂಕ: 19.08.2022.

*****

**ಪ್ರಸ್ತಾವನೆ:**

ಮೇಲೆ ಓದಲಾದ ಪ್ರಸ್ತಾವನೆಯಲ್ಲಿ ಕೋವಿಡ್ -19ರ ಸಾಂಕ್ರಾಮಿಕ ರೋಗವು ಹರಡುತ್ತಿರುವ ಕಾರಣ ಹಾಗೂ ಹಲವಾರು ಸಹಕಾರ ಸಂಘಗಳ/ಬ್ಯಾಂಕುಗಳ ಹಾಗೂ ಸೌಹಾರ್ದ ಸಹಕಾರಿಗಳಲ್ಲಿ ಅನೇಕ ಸದಸ್ಯರು ಹಿರಿಯ ನಾಗರೀಕರಾಗಿದ್ದು, ಇವರುಗಳ ಆರೋಗ್ಯದ ಹಿತದೃಷ್ಟಿಯಿಂದ 2021-22ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯನ್ನು Virtual Meeting ಮೂಲಕ ನಡೆಸಲು ಅನುಮತಿ ನೀಡುವ ಸಂಬಂಧ ಹಲವು ಸಹಕಾರ ಸಂಘಗಳಿಂದ ಮನವಿ / ಕೋರಿಕೆಗಳು ಸ್ವೀಕೃತವಾಗಿರುವುದರಿಂದ ಸಹಕಾರ ಸಂಘ / ಬ್ಯಾಂಕುಗಳ ಹಾಗೂ ಸೌಹಾರ್ದ ಸಹಕಾರಿಗಳ 2021-22ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಗಳನ್ನು Virtual Meeting ಮೂಲಕ ನಡೆಸಲು ಅನುಮತಿ ನೀಡುವ ಕುರಿತು ನಿಬಂಧಕರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮುಂದುವರೆದು, 2021-22ನೇ ಸಾಲಿನ ವಾರ್ಷಿಕ ಮಹಾಸಭೆಗಳನ್ನು Virtual Meeting ಮೂಲಕ ನಡೆಸಲು ಅನುಮತಿ ನೀಡುವ ಸಂಬಂಧ ಸರ್ಕಾರಕ್ಕೂ ಸಹ ಗಣ್ಯ ವ್ಯಕ್ತಿಗಳಿಂದ ಹಾಗೂ ಸಹಕಾರಿಗಳಿಂದ ಮನವಿಗಳು ಸ್ವೀಕೃತವಾಗಿರುತ್ತವೆ.

ಪರಿಶೀಲಿಸಲಾಗಿ ಸಹಕಾರ ಸಂಘ/ ಬ್ಯಾಂಕುಗಳು ಹಾಗೂ ಸೌಹಾರ್ದ ಸಹಕಾರಿಗಳಲ್ಲಿ ಅನೇಕ ಹಿರಿಯ ನಾಗರೀಕರಿದ್ದು, ಇವರುಗಳ ಆರೋಗ್ಯದ ಹಿತದೃಷ್ಟಿಯಿಂದ ಹಾಗೂ ರಾಜ್ಯದಲ್ಲಿ ಕೋವಿಡ್-19 ಪ್ರಕರಣಗಳು ಪ್ರಸ್ತುತ ಏರಿಕೆಯಾಗುತ್ತಿರುವುದರಿಂದ ಮುನ್ನೆಚ್ಚರಿಕೆ ವಹಿಸುವುದು ಸೂಕ್ತವೆಂದು ಹಾಗೂ Virtual Meeting ನಲ್ಲಿ ಹೆಚ್ಚಿನ ಸದಸ್ಯರು ಭಾಗವಹಿಸಲು ಅವಕಾಶವಾಗುವುದನ್ನು ಮನಗಂಡು ಈ ಕೆಳಕಂಡಂತೆ ಆದೇಶಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಇ 69 ಸಿಎಲ್ಎಮ್ 2022 (ಇ), ಬೆಂಗಳೂರು, ದಿನಾಂಕ: 25.08.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 121ರಡಿ ಮತ್ತು ಕರ್ನಾಟಕ ಸೌಹಾರ್ದ ಸಹಕಾರಿ ಅಧಿನಿಯಮ 1997ರ ಪ್ರಕರಣ 70ರಡಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರದನ್ವಯ ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ ಒಂದು ಸಾವಿರಕ್ಕಿಂತ ಕಡಿಮೆ ಸದಸ್ಯರನ್ನು ಹೊಂದಿರುವ ಸಹಕಾರ ಸಂಘಗಳು/ಬ್ಯಾಂಕುಗಳು ಹಾಗೂ ಸೌಹಾರ್ದ ಸಹಕಾರಿಗಳು 2021-22ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯನ್ನು**ಕಡ್ಡಾಯವಾಗಿ ಭೌತಿಕ ಹಾಜರಾತಿಯೊಂದಿಗೆ ನಡೆಸಲು ಸೂಚಿಸಿದೆ.**

ಮುಂದುವರೆದು, ಒಂದು ಸಾವಿರಕ್ಕಿಂತ ಹೆಚ್ಚಿನ ಸದಸ್ಯರನ್ನು ಹೊಂದಿರುವ ಸಹಕಾರ ಸಂಘಗಳು/ ಬ್ಯಾಂಕುಗಳು ಹಾಗೂ ಸೌಹಾರ್ದ ಸಹಕಾರಿಗಳು ಸರ್ವ ಸದಸ್ಯರ ವಾರ್ಷಿಕ ಮಹಾ ಸಭೆಯನ್ನು ಭೌತಿಕವಾಗಿ ನಡೆಸಲು ಸಾಧ್ಯವಾಗದಿದ್ದ ಪಕ್ಷದಲ್ಲಿ **Virtual Meeting ವಿಧಾನವನ್ನು ಅನುಸರಿಸಿ ಈ ಕೆಳಕಂಡ ನಿಬಂಧನೆಗೊಳಪಟ್ಟು ನಡೆಸಲು ಅನುಮತಿ ನೀಡಿ ಆದೇಶಿಸಿದೆ.**

- ಸರ್ವ ಸದಸ್ಯರ ಸಭೆ ನಡೆಯುವ ದಿನಾಂಕ ಮತ್ತು ವೇಳೆಯನ್ನು ದಿನಪತ್ರಿಕೆಯಲ್ಲಿ ಪ್ರಕಟಿಸುವುದು.

- ಸಭೆಯ ನೋಟೀಸು ಹಾಗೂ ಇನ್ನಿತರೆ ದಾಖಲಾತಿಗಳನ್ನು ಸಂಘದ ವೆಬ್‌ಸೈಟ್ ಮೂಲಕ ಪ್ರಚುರಗೊಳಿಸುವುದು ಹಾಗೂ ಹಾಲಿ ಅನುಸರಿಸುತ್ತಿರುವ ಪದ್ಧತಿಯಂತೆ ನೋಟೀಸುಗಳನ್ನು ಅಂಚೆಯ ಮೂಲಕ ರವಾನಿಸಲು ಸಹ ಕ್ರಮವಿಡತಕ್ಕದ್ದು.
- ಇಂತಹ ಸಭೆಯ ನಡವಳಿಗಳನ್ನು ಅಧಿಕೃತವಾಗಿ ರೆಕಾರ್ಡ್ ಮಾಡಿ ದಾಖಲಿಸುವ ತಂತ್ರಜ್ಞಾನ ಅಳವಡಿಸಿಕೊಳ್ಳತಕ್ಕದ್ದು.
- ಸರ್ವ ಸದಸ್ಯರ ಸಭೆ ನಡೆಸುವ ಸ್ಥಳದಲ್ಲಿ ಕೋವಿಡ್-19ರ ನಿಯಮಾವಳಿಗಳಿಗೆ ಒಳಪಟ್ಟು ಹಾಜರಾತಿಯನ್ನು ನಿರ್ವಹಿಸಿ ಸಹಕಾರ ಸಂಘಗಳ/ಸೌಹಾರ್ದ ಸಹಕಾರಿಗಳ ಅಧಿನಿಯಮಗಳನ್ವಯ ನಮೂದಿಸಿರುವ ಅಂಶಗಳನ್ನು ಕಾರ್ಯಸೂಚಿಯಲ್ಲಿ ಅಳವಡಿಸಿಕೊಂಡು ಹಾಲಿ ಪದ್ಧತಿಯಂತೆ ನಡೆಸಲು ಕ್ರಮವಹಿಸತಕ್ಕದ್ದು.
- ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ/ಹೊರಡಿಸಿರುವ ಕೋವಿಡ್-19 ಮಾರ್ಗಸೂಚಿಗಳನ್ನು ಮತ್ತು ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

25/8/22

(ಎ. ಸಿ. ದಿವಾಕರ್)
ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ,
ಸರ್ಕಾರದ ಜಂಟಿ ಕಾರ್ಯದರ್ಶಿ,
ಸಹಕಾರ ಇಲಾಖೆ.

**ಇವರಿಗೆ:-**

ಸಂಕಲನಕಾರರು ಕರ್ನಾಟಕ ರಾಜ್ಯಪತ್ರ ಬೆಂಗಳೂರು, ಇವರಿಗೆ ಕರ್ನಾಟಕ ರಾಜ್ಯಪತ್ರದಲ್ಲಿ ಕೂಡಲೇ ಪ್ರಕಟಿಸಿ, ಅದರ 25 ಪ್ರತಿಗಳನ್ನು ಒದಗಿಸಲು ಕೋರಿದೆ.

**ಪ್ರತಿಗಳು: -**

1. ಮಹಾಲೇಖಪಾಲರು, (ಜಿ & ಎಸ್‌ಎಸ್‌ಎ), (ಇ & ಆರ್‌ಎಸ್‌ಎ), (ಎ&ಇ) ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01.
2. ಮಾನ್ಯ ಮುಖ್ಯಮಂತ್ರಿಯವರ ವಿಶೇಷ ಕರ್ತವ್ಯಾಧಿಕಾರಿ , ವಿಧಾನಸೌಧ, ಬೆಂಗಳೂರು.
3. ಸಹಕಾರ ಸಂಘಗಳ ನಿಬಂಧಕರು, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು-52.
4. ಆಯುಕ್ತರು, ಸಹಕಾರ ಚುನಾವಣಾ ಪ್ರಾಧಿಕಾರ, ಬೆಂಗಳೂರು.
5. ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರು, ನಂ.17, ಜಯನಿವಾಸ, ಶಂಕರಮಠ ರಸ್ತೆ, ಬಸವನಗುಡಿ, ಬೆಂಗಳೂರು.
6. ಮಾನ್ಯ ಸಹಕಾರ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
7. ಸಹಕಾರ ಸಂಘಗಳ ಜಂಟಿ ನಿಬಂಧಕರು/ಲೆಕ್ಕಪರಿಶೋಧನಾ ಜಂಟಿ ನಿರ್ದೇಶಕರು ಬೆಂಗಳೂರು/ ಮೈಸೂರು/ ಕಲಬುರ್ಗಿ/ಬೆಳಗಾವಿ ಪ್ರಾಂತ.
8. ರಾಜ್ಯದ ಎಲ್ಲಾ ಸಹಕಾರ ಸಂಘಗಳ ಉಪನಿಬಂಧಕರುಗಳಿಗೆ (ಸಹಕಾರ ಸಂಘಗಳ ನಿಬಂಧಕರ ಮೂಲಕ).
9. ರಾಜ್ಯದ ಎಲ್ಲಾ ಸಹಕಾರ ಸಂಘಗಳ ಉಪ ನಿರ್ದೇಶಕರುಗಳಿಗೆ (ಸಹಕಾರ ಸಂಘಗಳ ಲೆಕ್ಕಪರಿಶೋಧನಾ ನಿರ್ದೇಶಕರ ಮೂಲಕ).
10. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಹಕಾರಿ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್ ನಿ., ಬೆಂಗಳೂರು.
12. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಹಾಲು ಉತ್ಪಾದಕರ ಮಹಾಮಂಡಳ ನಿ., (ಕೆಎಂಎಫ್), ಬೆಂಗಳೂರು.
13. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಪಟ್ಟಣ ಸಹಕಾರ ಬ್ಯಾಂಕುಗಳ ಮಹಾಮಂಡಳ ನಿ., ಜೋಡಿ ರಸ್ತೆ, ಬೆಂಗಳೂರು-27.
14. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ನಿರ್ಮಾಣ ಭವನ, ಡಾ||ರಾಜಕುಮಾರ್ ರಸ್ತೆ, 1ನೇ ಬ್ಲಾಕ್ ರಾಜಾಜಿನಗರ, ಬೆಂಗಳೂರು-10.
15. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಹಕಾರ ಇಲಾಖೆ ಬೆಂಗಳೂರು.
16. ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿ.

***